ಕರ್ನಾಟಕ ಸರ್ಕಾರ
**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು – 560 009.

ಸಂಖ್ಯೆ: ಕಪಂರಾಆ-ಅಭಿವೃದ್ಧಿ/469/2023 ದಿನಾಂಕ:04.12.2023

**ಅತೀ ಜರೂರು**

**ಇವರಿಗೆ,**
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

ವಿಷಯ:- ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ

ಉಲ್ಲೇಖ:-1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/64/ಇ-ಆಡಳಿತ/2022 ದಿನಾಂಕ:08.08.2022
2. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಫೀಜುಗಳು)ನಿಯಮಗಳು, 2021

---

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಫೀಜುಗಳು)ನಿಯಮಗಳು, 2021ರ ನಿಯಮ 17, 18 ಮತ್ತು 19ರಲ್ಲಿ ಅಧಿನಿಯಮದ ಪ್ರಕರಣ 199ಕ್ಕನುಗುಣವಾಗಿ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲು ತೆರಿಗೆಗೆ ಗುರಿಯಾಗತಕ್ಕ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಸಮಗ್ರ ಸಮೀಕ್ಷೆಯನ್ನು ನಡೆಸಿ, ಆಸ್ತಿ ಮತ್ತು ಆಸ್ತಿ ತೆರಿಗೆ ನಮೂನೆಯಲ್ಲಿ ಆಸ್ತಿಯ ವಿವರಗಳನ್ನು ದಾಖಲಿಸಿ, ತೆರಿಗೆ ಲೆಕ್ಕಾಚಾರ ಮಾಡಿ, ನಮೂನೆ-9ಎ ವಹಿಯಲ್ಲಿ ನಮೂದಿಸಿ, ನಂತರ ನಮೂನೆ-9ಎ ವಹಿಯಲ್ಲಿನ ವಿವರಗಳ ಆಧಾರದ ಮೇಲೆ ನಮೂನೆ-9, ನಮೂನೆ-11ಎ ಮತ್ತು ನಮೂನೆ-11ಬಿ ವಹಿಗಳಲ್ಲಿ ದಾಖಲಿಸಿ, ನಂತರ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆಗಳನ್ನು ವಿತರಿಸುವುದಾಗಿರುತ್ತದೆ.

ಅದರಂತೆ, ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆಯನ್ನು ಮೂರು ತಿಂಗಳೊಳಗೆ ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಸರ್ಕಾರವು ಆದೇಶಿಸಿರುತ್ತದೆ. ಸದರಿ ಆದೇಶದಂತೆ, ಮೂರು ತಿಂಗಳೊಳಗೆ ಮ್ಯಾನ್ಯೂಯಲ್ ಸಮೀಕ್ಷೆಯನ್ನು ಪೂರ್ಣಗೊಳಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸುವ ಪ್ರಕ್ರಿಯೆಯಲ್ಲಿ ಇದುವರೆಗೆ ಯಾವುದೇ ಪ್ರಗತಿ ಸಾಧಿಸದೇ ಇರುವುದು ಕಂಡುಬಂದಿರುತ್ತದೆ. ಇದರಿಂದ ಗ್ರಾಮ ಪಂಚಾಯಿತಿ ತೆರಿಗೆ ವ್ಯಾಪ್ತಿಯಿಂದ ಹೊರಗುಳಿದ ಸ್ಥಿರಾಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸುವ ಕಾರ್ಯವು ಕುಂಠಿತವಾಗಿರುತ್ತದೆ. ಈ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಅಸಮಾಧಾನ ವ್ಯಕ್ತಪಡಿಸಿ, ತ್ವರಿತವಾಗಿ ಪ್ರಗತಿ ಸಾಧಿಸಲು ಸೂಚಿಸಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿ, ರಾಜ್ಯದ ಹಲವು ಜಿಲ್ಲೆಗಳಲ್ಲಿ ಮ್ಯಾನ್ಯೂಯಲ್ ಸಮೀಕ್ಷೆಗೆ ಅವಶ್ಯವಿರುವ ನಿಗಧಿತ ಆಸ್ತಿ ಮತ್ತು ಆಸ್ತಿ ತೆರಿಗೆಯ 11,74,746 ನಮೂನೆಗಳನ್ನು ಸಂಗ್ರಹಿಸದೇ ಇರುವುದು ಕಂಡುಬಂದಿರುತ್ತದೆ. ಹಾಗೂ ಕೆಲವು ಜಿಲ್ಲೆಗಳಲ್ಲಿ ಜೆರಾಕ್ಸ್ ಪ್ರತಿಗಳು ಹಾಗೂ ಅಪೂರ್ಣ ಮಾಹಿತಿ ಇರುವ ಒಂದು ಪುಟದ ಪ್ರತಿಗಳನ್ನು ಮ್ಯಾನ್ಯೂಯಲ್ ಸಮೀಕ್ಷೆಗೆ ಬಳಕೆ ಮಾಡುತ್ತಿರುವುದು ಕಂಡುಬಂದಿರುತ್ತದೆ.

ಈಗಾಗಲೇ, ದಿನಾಂಕ:05.12.2020ರಂದು ಇ-ಮೇಲ್ ಮುಖಾಂತರ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳಿಗೆ ಮ್ಯಾನ್ಯುಯಲ್ ಸಮೀಕ್ಷೆಗೆ ಅಗತ್ಯವಿರುವ ನಮೂನೆಯ ಮಾದರಿಯನ್ನು ನೀಡಲಾಗಿರುತ್ತದೆ. ಅದರಂತೆ, ಆಯಾ ಜಿಲ್ಲೆಗಳ ಪ್ರದೇಶವಾರು ಆಸ್ತಿಗಳ ವರ್ಗೀಕರಣಕ್ಕನುಗುಣವಾಗಿ ಹಾಗೂ ದಿನಾಂಕ:31.03.2022ರಿಂದ ಜಾರಿಗೆ ಬಂದಿರುವ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2021ರ ನಿಯಮಗಳನ್ವಯ ಜಿಲ್ಲಾ ನೋಡಲ್ ಅಧಿಕಾರಿಗಳಾಗಿರುವ ಉಪಕಾರ್ಯದರ್ಶಿ(ಅಭಿವೃದ್ಧಿ)ಗಳು ಸಮೀಕ್ಷೆಯ ಮಾದರಿ ನಮೂನೆಯನ್ನು ಪರಿಷ್ಕರಿಸಿ ಸಿದ್ಧಪಡಿಸಿ ಅಗತ್ಯವಿರುವ ನಮೂನೆಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರಂತೆ ಜಿಲ್ಲಾ ಪಂಚಾಯಿತಿ ಹಂತದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಗ್ರಹಿಸಲು ಅಗತ್ಯ ಕ್ರಮ ಕೈಗೊಂಡು ಮ್ಯಾನ್ಯುಯಲ್ ಸಮೀಕ್ಷೆಯ ಕಾರ್ಯವನ್ನು ದಿನಾಂಕ:20.12.2023ರೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಲು ತಿಳಿಸಲಾಗಿದೆ.

ಆಸ್ತಿ ಸಮೀಕ್ಷೆಗೆ ಬಳಸುವ ನಮೂನೆಗಳ ವೆಚ್ಚಗಳನ್ನು ಗ್ರಾಮ ಪಂಚಾಯಿತಿಗಳು ತಮ್ಮ ಸ್ವಂತ ನಿಧಿ, 15ನೇ ಹಣಕಾಸು ಅಥವಾ ಉಳಿಕೆ ಇರುವ 14ನೇ ಹಣಕಾಸು ಅನುದಾನಗಳಲ್ಲಿ ಭರಿಸುವುದು.

ಮುಂದುವರಿದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಪ್ರತ್ಯೇಕವಾಗಿ ಸಮೀಕ್ಷೆ ನಮೂನೆಗಳ ಮಾಸ್ಟರ್ ರಿಜಿಸ್ಟರ್ ನಿರ್ವಹಿಸಿ, ಆಸ್ತಿ ಮತ್ತು ಆಸ್ತಿ ತೆರಿಗೆ ನಮೂನೆಯ ಯಾಂತ್ರೀಕೃತ ಮುದ್ರಿತ ವಿಶಿಷ್ಟ ಗುರುತಿನ(Unique ID) ಕ್ರಮಸಂಖ್ಯೆಗಳನ್ನು ದಾಖಲಿಸತಕ್ಕದ್ದು.

ಸಮೀಕ್ಷೆಯ ನಂತರ ವಿವರಗಳನ್ನು ನಮೂನೆ-9ಎ, ನಮೂನೆ-9, ನಮೂನೆ-11ಎ ಮತ್ತು ನಮೂನೆ-11ಬಿ ವಹಿಗಳಲ್ಲಿ ತ್ವರಿತವಾಗಿ ದಾಖಲಿಸಿ, ದಿನಾಂಕ:31.12.2023ರೊಳಗೆ ಪಂಚತಂತ್ರ 2.0 ತಂತ್ರಾಂಶದಲ್ಲಿ ಆರೋಹಿಸಿ, ಕಡ್ಡಾಯವಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳಿಗೆ ಪಂಚತಂತ್ರ 2.0 ತಂತ್ರಾಂಶದ ಮೂಲಕ ತೆರಿಗೆ ವಿಧಿಸಿ, ತೆರಿಗೆ ವಸೂಲಿ ಮಾಡಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

(ಆಯುಕ್ತರು, ಕ.ಪಂ.ರಾ.ಆಯುಕ್ತಾಲಯ ಇವರಿಂದ ಅನುಮೋದಿಸಲ್ಪಟ್ಟಿದೆ.)

ನಿರ್ದೇಶಕರು(ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

ಪ್ರತಿಯನ್ನು,

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್)ಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ
2. ನಿರ್ದೇಶಕರು(ಅಭಿವೃದ್ಧಿ) ಹಾಗೂ ರಾಜ್ಯ ನೋಡಲ್ ಅಧಿಕಾರಿಗಳು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು
3. ಉಪಕಾರ್ಯದರ್ಶಿ(ಅಭಿವೃದ್ಧಿ)ಗಳು ಹಾಗೂ ಜಿಲ್ಲಾ ನೋಡಲ್ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು ಇವರಿಗೆ ಸೂಕ್ತ ಕ್ರಮಕ್ಕಾಗಿ
4. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳು ಇವರಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಸೂಕ್ತ ಕ್ರಮಕ್ಕಾಗಿ
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳು ಇವರಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಸೂಕ್ತ ಕ್ರಮಕ್ಕಾಗಿ
6. ಕಛೇರಿ ರಕ್ಷಾ ಕಡತಕ್ಕೆ